ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
ಆರನೇ ಅಧಿವೇಶನ
(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 26ನೇ ಮಾರ್ಚ್, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ವಿತ್ತೀಯ ಕಾರ್ಯಕಲಾಪಗಳು

2015-16ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೇ ಪಟ್ಟಿ

3. ಅರ್ಜಿಗಳನ್ನೊಪ್ಪಿಸುವುದು

ಶ್ರೀ ಎನ್.ಹೆಚ್.ಶಿವಶಂಕರರೆಡ್ಡಿ (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು:-

1. ಹಿರೇಕೆರೂರು ತಾಲ್ಲೂಕಿನ 111ನೇ ಕಿ.ಮೀ.ನಲ್ಲಿ ಸಂಪರ್ಕ ಸೇತುವೆ ಕಲ್ಪಿಸಿಕೊಡುವ ಬಗೆಗಿನ ಅರ್ಜಿಯನ್ನೊಪ್ಪಿಸುವುದು.
2. ಸರ್ಕಾರಿ ಜಿಲ್ಲಾ ಮುದ್ರಣಾಲಯ(ತುಮಕೂರು) ಕಛೇರಿಯಲ್ಲಿ ಹತ್ತು ವರ್ಷಗಳಿಗೂ ಹೆಚ್ಚುಕಾಲ ದುಡಿದ ಕಾರ್ಮಿಕರಿಗೆ ಉದ್ಯೋಗ ಖಾಯಂ ಮಾಡುವ ಬಗೆಗಿನ ಅರ್ಜಿಯನ್ನೊಪ್ಪಿಸುವುದು.

4. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು.

(i) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2015
ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು

ಅ) 2015ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ)(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಮು.ತಿ.ನೋ.,.

(ii) ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯಲು ಮಕ್ಕಳ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕ, 2015

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು

ಅ) 2015ನೇ ಸಾಲಿನ ಉಚಿತ ಮತ್ತು ಕಡ್ಡಾಯ ಶಿಕ್ಷಣ ಪಡೆಯಲು ಮಕ್ಕಳ ಹಕ್ಕು (ಕರ್ನಾಟಕ ತಿದ್ದುಪಡಿ) ವಿಧೇಯಕ, 2015
ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(iii) ಕನ್ನಡ ಭಾಷಾ ಕಲಿಕೆ ವಿಧೇಯಕ, 2015

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು

ಅ) 2015ನೇ ಸಾಲಿನ ಕನ್ನಡ ಭಾಷಾ ಕಲಿಕೆ ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5 . ಗಮನ ಸೆಳೆಯುವ ಸೂಚನೆಗಳು

1. ಶ್ರೀಮತಿ ಶಾರದಾ ಪೂರ್ಯಾ ನಾಯ್ಕ್ ಅವರು ಶಿವಮೊಗ್ಗ ತಾಲ್ಲೂಕು, ಕಸಬಾ ಹೋಬಳಿ ಸಿದ್ಲಿಪುರ ಮತ್ತು ದೇವಕಾತಿ ಕೊಪ್ಪ ಗ್ರಾಮಗಳ ಬಗರ್ ಹುಕುಂ ಸಾಗುವಳಿದಾರರ ಜಮೀನನ್ನು ಕೆಐಎಡಿಬಿ ವತಿಯಿಂದ ಭೂಸ್ವಾಧೀನ ಪಡಿಸಿಕೊಂಡಿದ್ದು ಸದರಿ ಸಾಗುವಳಿದಾರರಿಗೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2. ಡಾ॥ ವಿಶ್ವನಾಥ್ ಈ ಪಾಟೀಲ್ ಅವರು ರಾಜ್ಯ ಸರ್ಕಾರಿ ನೌಕರರಿಗೆ ಇರುವ ಜ್ಯೋತಿ ಸಂಜೀವಿನಿ ಯೋಜನೆಯನ್ನು ನಿವೃತ್ತ ಸರ್ಕಾರಿ ನೌಕರರಿಗೂ ವಿಸ್ತರಿಸುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. ಶ್ರೀ ಜೆ.ಆರ್.ಲೋಬೋ ಅವರು ಕರ್ನಾಟಕದ ಕರಾವಳಿ ಪ್ರದೇಶದ ಎಲ್ಲಾ ಮೀನುಗಾರಿಕಾ ಬಂದರಿನಲ್ಲಿನ ಹಳೆಯ ಮರದ ಮೀನುಗಾರಿಕಾ ಬೋಟುಗಳನ್ನು ಹೊಸ ಸ್ಟೀಲ್ ಟ್ರಾಲ್ ಬೋಟುಗಳನ್ನಾಗಿ ಪರಿವರ್ತನೆ ಮಾಡಲು ಅನುಮತಿ ನಿರಾಕರಿಸಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

4. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ರಾಮನಗರ ತಾಲ್ಲೂಕು ಬಿಡದಿ ಹೋಬಳಿಯಲ್ಲಿ ಕರ್ನಾಟಕ ಹೌಸಿಂಗ್ ಬೋರ್ಡ್ ವತಿಯಿಂದ ಹಲವಾರು ರೈತರುಗಳ ಜಮೀನುಗಳನ್ನು ಭೂಸ್ವಾಧೀನ ಪಡಿಸಿಕೊಂಡಿದ್ದು, ಆ ರೈತರಿಗೆ ಉಚಿತ ನಿವೇಶನವನ್ನು ಇದುವರೆವಿಗೂ ನೀಡಿಲ್ಲದಿರುವ ಬಗ್ಗೆ ಹಾಗೂ ಕಾಕರಾಮನಹಳ್ಳಿ, ಬೋರಹಳ್ಳಿ, ಮುದ್ದಾಪುರ ಕರೇನಹಳ್ಳಿ ಗ್ರಾಮಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

5. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನ ಜಿಲ್ಲೆಯ ಹೊಳೆನರಸೀಪುರ ಪಟ್ಟಣದಲ್ಲಿ ವಾಣಿಜ್ಯ ಮಳಿಗೆಗಳ ಸಂಕೀರ್ಣ ಹಾಗೂ ನಗರ ಪ್ರದೇಶದಲ್ಲಿ ಪುರಸಭೆಗೆ ಸೇರಿದ ಖಾಲಿ ಜಾಗದಲ್ಲಿ ಹೊಸದಾಗಿ ನಿರ್ಮಿಸಲಾಗಿರುವ ಮಳಿಗೆಗಳಿಗೆ ಬಾಡಿಗೆಯನ್ನು ನಿಗದಿಪಡಿಸದಿರುವುದರಿಂದ ನಗರ ಸಭೆಗೆ ನಷ್ಟ ಉಂಟಾಗುತ್ತಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

6. ಶ್ರೀ ಸಿ.ಟಿ.ರವಿ ಅವರು ಚಿಕ್ಕಮಗಳೂರು ಭದ್ರಾ ವನ್ಯಜೀವಿ ವಿಭಾಗದ ಪ್ರದೇಶ ವ್ಯಾಪ್ತಿಗೆ ಒಳಪಡದ ವಸತಿ ಪ್ರದೇಶದ ಗ್ರಾಮಗಳನ್ನು ಭದ್ರಾ ಹುಲಿ ಸಂರಕ್ಷಿತ ಸೂಕ್ಷ್ಮ ಪರಿಸರ ವಲಯದ ವ್ಯಾಪ್ತಿಗೆ ಸೇರಿಸುವ ಯೋಜನೆಯ ಸಾಧಕ-ಭಾಧಕಗಳನ್ನು ಸಮರ್ಪಕವಾಗಿ ವಿಶ್ಲೇಷಿಸುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

7. ಶ್ರೀ ಬಿ.ಜ಼ಡ್. ಜಮೀರ್ ಅಹಮದ್ ಖಾನ್ ಅವರು ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪೋಲೀಸರು ಅಮಾಯಕ ಯುವಕರ ಹೆಸರುಗಳನ್ನು ರೌಡಿ ಶೀಟರ್ ಪಟ್ಟಿಯಲ್ಲಿ ಸೇರಿಸುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

8. ಶ್ರೀಯುತರುಗಳಾದ ಹೆಚ್.ಡಿ.ಕುಮಾರಸ್ವಾಮಿ, ಹೆಚ್.ಕೆ.ಕುಮಾರಸ್ವಾಮಿ, ವೈ.ಎಸ್.ವಿ.ದತ್ತಾ, ಹೆಚ್.ಡಿ.ರೇವಣ್ಣ ಮತ್ತು ಕೆ.ಎಂ.ಶಿವಲಿಂಗೇಗೌಡ ಹಾಗೂ ಇತರರು ಹಾಸನ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟಗಳಲ್ಲಿ 2000-10ನೇ ಸಾಲುಗಳಲ್ಲಿ ಅವ್ಯವಹಾರ ಹಾಗೂ ಸ್ವಜನಪಕ್ಷಪಾತ ನಡೆದಿದೆ ಎನ್ನುವ ವಿಷಯವು ನ್ಯಾಯಾಲಯದಲ್ಲಿದ್ದರೂ ಸಹಕಾರ ಕಾಯ್ದೆ ಕಲಂ 64ರಲ್ಲಿ ವಿಚಾರಣೆಗೆ ಸೂಚಿಸಿರುವ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

9. ಶ್ರೀ ಸಂಜಯ ಬಿ. ಪಾಟೀಲ್ ಅವರು ಕಳೆದ ಎರಡು ವರ್ಷದ ಹಿಂದೆ ಬೆಳಗಾವಿ ತಾಲ್ಲೂಕಿನ ಸುಮಾರು 10 ಹಳ್ಳಿಗಳಲ್ಲಿ ಭೂಮಿ ಮರು ಮಾಪನೆಯಾಗಿದ್ದರೂ ಇಲ್ಲಿಯವರೆಗೂ ರೈತರಿಗೆ ಉತಾರ ವಿತರಣೆಯಾಗದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

10. ಶ್ರೀ ಗೋವಿಂದ ಎಂ. ಕಾರಜೋಳ ಅವರು ಗ್ರಾಮಪಂಚಾಯತಿಗಳಲ್ಲಿ ಪೂರ್ವಾನುಮೋದನೆಯಿಲ್ಲದೇ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯ ಸೇವೆಯನ್ನು ಅನುಮೋದನೆಗೆ ಒಳಪಡಿಸುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

11. ಶ್ರೀ ಹೆಚ್.ಆರ್.ಅಲಗೂರು(ರಾಜು) ಅವರು ವಿಜಯಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ವಿಫಲವಾದ ಕೊಳವೆ ಬಾವಿಗಳಿಗೆ ಹಣ ಬಿಡುಗಡೆಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

12. ಶ್ರೀ ಬಸವರಾಜ್ ಬೊಮ್ಮಾಯಿ ಅವರು ಎ.ಐ.ಬಿ.ಪಿ.ಯೋಜನೆಯಡಿಯಲ್ಲಿ ಹೊಸ ಯೋಜನೆಗಳನ್ನು ಹಾಗೂ ನಿಯಮಾವಳಿಗಳ ಜಾರಿಯಿಂದ ರಾಜ್ಯದ ಕೃಷಿ ರೈತ ಮತ್ತು ಜನತೆಯ ಮೇಲೆ ಆಗುವ ಪರಿಣಾಮಗಳ ಬಗ್ಗೆ ಮಾನ್ಯ ಭಾರೀ ನೀರಾವರಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಎಸ್. ಸುರೇಶ್ ಕುಮಾರ್ ಅವರು ಮೊಬೈಲ್ ಸ್ಥಾವರಗಳ ಅಳವಡಿಕೆ ಬಗ್ಗೆ ನಿಯಮಗಳನ್ನು ರೂಪಿಸದಿರುವುದರಿಂದ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

14. ಶ್ರೀಯುತರುಗಳಾದ ಹೆಚ್.ಎಸ್.ಶಿವಶಂಕರ, ಜೆ.ಟಿ.ಪಾಟೀಲ್, ಎನ್.ಹೆಚ್.ಕೋನರೆಡ್ಡಿ, ಭೀಮಾನಾಯ್ಕ್, ಪಿ.ಆರ್. ಸುಧಾಕರಲಾಲ್ ಹಾಗೂ ಇತರರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ವಿಕಾಸ ಯೋಜನೆಯ ಆದೇಶದಂತೆ ಗ್ರಾಮಗಳನ್ನು ಆಯ್ಕೆ ಮಾಡುವ ಮಾನದಂಡ ಹಾಗೂ ಗ್ರಾಮ ಪಂಚಾಯತ್‌ಗಳಿಗೆ ನೀಡಿರುವ ಅನುಷ್ಠಾನದ ಹೊಣೆಯನ್ನು ಬದಲಾಯಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

15. ಶ್ರೀ ಪಿ. ರಾಜೀವ್ ಅವರು ರಾಜ್ಯದಲ್ಲಿರುವ ಪೋಲೀಸ್ ಸಿಬ್ಬಂದಿಗಳಿಗೆ ಕಳೆದ ಮೂರು ತಿಂಗಳಿಂದ ಪಡಿತರ ವಿತರಣೆ ನಿಲ್ಲಿಸಿರುವುದರಿಂದ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

16. ಶ್ರೀ ಎಂ.ರಾಜಣ್ಣ ಅವರು ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಅರಳುಮಲ್ಲಿಗೆ ಅಂಚೆ, ಆಲಹಳ್ಳಿ ಗ್ರಾಮದ ವಾಸಿಯಾದ ಶ್ರೀಮತಿ ಉಮಾದೇವಿ ಕೋಂ ಚನ್ನೇಗೌಡ ಇವರ ಬೆಳೆಯನ್ನು ನಾಶಪಡಿಸಿರುವುದಲ್ಲದೇ ಕೊಲೆ ಬೆದರಿಕೆಯನ್ನೊಡುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಟಿ.ವೆಂಕಟರಮಣಯ್ಯ, ಡಾ|| ಕೆ.ಶ್ರೀನಿವಾಸ ಮೂರ್ತಿ ಮತ್ತು ಪಿ.ಆರ್. ಸುಧಾಕರ್ ಲಾಲ್ ಅವರುಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಶೇಖರಣೆಯಾಗುವ ಘನತ್ಯಾಜ್ಯ ಕಸವನ್ನು ದೊಡ್ಡಬಳ್ಳಾಪುರ ತಾಲ್ಲೂಕಿನ ಸಕ್ಕರೆ ಗೊಲ್ಲಹಳ್ಳಿ ಗ್ರಾಮ ಪಂಚಾಯತಿಯ ಗುಂಡ್ಲುಹಳ್ಳಿ ಗ್ರಾಮದಲ್ಲಿ ಟೆರ್ರಾಫಾರ್ಮ್ ಕಸ ಸಂಸ್ಕರಣ ಘಟಕವು ವೈಜ್ಞಾನಿಕವಾಗಿ ಕಸವನ್ನು ಸಂಸ್ಕರಣೆ ಮಾಡದೆ ಪರಿಸರ ಮಾಲಿನ್ಯ ಉಂಟಾಗುತ್ತಿರುವುದರಿಂದ ಟೆರ್ರಾ ಫಾರ್ಮ್ ಮತ್ತು ಎಂ.ಎಸ್.ಜಿ.ಪಿ. ಘಟಕದ ಕಾರ್ಯ ಸ್ಥಗಿತಗೊಳಿಸುವ ಬಗ್ಗೆ ಚರ್ಚೆ.

ಪು.ತಿ.ನೋ.,.

2. ಶ್ರೀ ಕೆ.ಎಸ್.ಪುಟ್ಟಣ್ಣಯ್ಯ ಅವರು ಸರ್ಕಾರವು ಉತ್ತರ ಕರ್ನಾಟಕದ ಕಬ್ಬಿಗೆ ಎಕ್ಸ್ ಫೀಲ್ಡ್, ದಕ್ಷಿಣ ಕರ್ನಾಟಕದ ಕಬ್ಬಿಗೆ ಎಕ್ಸ್ ಗೇಟ್ ಬೆಲೆ 2500ರೂ ಗಳನ್ನು ನಿಗದಿ ಮಾಡಿದ್ದರೂ ಇತ್ತೀಚಿನ ದಿನಗಳಲ್ಲಿ ಸಕ್ಕರೆ ಬೆಲೆಯು ಕುಸಿದಿದ್ದು, ಸಕ್ಕರೆ ಉತ್ಪಾದನೆ ಬೆಲೆಗಿಂತ ಕಡಿಮೆ ಬೆಲೆಗೆ ಸಕ್ಕರೆ ಮಾರಾಟವಾಗುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಜಿ.ಟಿ.ದೇವೇಗೌಡ, ಹೆಚ್.ಡಿ. ಕುಮಾರಸ್ವಾಮಿ, ಕೆ.ಎಸ್. ಪುಟ್ಟಣ್ಣಯ್ಯ, ಎನ್. ಚಲುವರಾಯ ಸ್ವಾಮಿ, ಸಾ.ರಾ.ಮಹೇಶ್ ಹಾಗೂ ಇತರರು ಮೈಸೂರಿನಲ್ಲಿರುವ ಮೆ:ಫಾಲ್ಕನ್ ಟೈರ್ಸ್ ಕಾರ್ಖಾನೆಯ ಆಡಳಿತ ಮಂಡಳಿಯವರ ನಿರ್ಲಕ್ಷ್ಯದಿಂದಾಗಿ ಕಾರ್ಖಾನೆಯು ಮುಚ್ಚುವ ಸ್ಥಿತಿಗೆ ಬಂದಿದ್ದು ಸುಮಾರು 2000 ಕುಟುಂಬಗಳ ಜೀವನ ನಿರ್ವಹಣೆಗೆ ತೊಂದರೆಯಾಗುತ್ತಿರುವುದರಿಂದ ಅವರುಗಳಿಗೆ ವೇತನ ಬಿಡುಗಡೆ ಹಾಗೂ ಕಾರ್ಖಾನೆಯನ್ನು ಸುಸ್ಥಿತಿಗೆ ಕೊಂಡೊಯ್ಯುವ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)